## ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: : 751(846)
ಮಾನ್ಯ ಸದಸ್ಯರ ಹೆಸರು :ಶ್ರೀ ಶಾಂತರಾಮ್ ಬುಡ್ನ ಸಿದ್ದಿ (ನಾಮ ನಿರ್ದೇಶನ ಹೊಂದಿದವರು)
ಉತ್ತರಿಸುವ ಸಚಿವರು :ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು
ಉತ್ತರಿಸಬೇಕಾದ ದಿನಾಂಕ :16.12.2024.

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಬೆಳಗಾವಿ ಜಿಲ್ಲೆ ಖಾನಾಪೂರ ತಾಲ್ಲೂಕಿನಲ್ಲಿ ಕೆಲವು ಕಡೆಗಳಲ್ಲಿ ಮರಾಠಿ ಶಾಲೆಗಳ ಬದಲು ಕನ್ನಡ ಮಾಧ್ಯಮದಲ್ಲಿ ತರಗತಿಗಳನ್ನು ಪ್ರಾರಂಭಿಸುವಂತೆ ಬೇಡಿಕೆ ಇರುವ ಶಾಲೆಗಳು ಎಷ್ಟು; | ಬೆಳಗಾವಿ ಜಿಲ್ಲೆ ಖಾನಾಪೂರ ತಾಲ್ಲೂಕಿನಲ್ಲಿ ಮರಾಠಿ ಶಾಲೆಗಳ ಬದಲು ಕನ್ನಡ ಮಾಧ್ಯಮದಲ್ಲಿ ತರಗತಿಗಳನ್ನು ಪ್ರಾರಂಭಿಸುವ ಕುರಿತಾದ ಯಾವುದೇ ಪ್ರಸ್ತಾವನೆಗಳು ಸ್ವೀಕೃತಗೊಂಡಿರುವುದಿಲ್ಲ. |
| ಆ) | ಖಾನಾಪುರ ತಾಲ್ಲೂಕಿನ ತಾವರಗಟ್ಟಿ ಮತ್ತು ಬಾಳಗುಂದ ಗ್ರಾಮದಲ್ಲಿ ಮರಾಠಿ ಮಾಧ್ಯಮದ ಪ್ರಾಥಮಿಕ ಶಾಲೆಗಳಿದ್ದು, ಇಲ್ಲಿನ 80% ಮಕ್ಕಳು ಕನ್ನಡ ಮಾಧ್ಯಮಕ್ಕಾಗಿ ಪಕ್ಕದ ಊರಿಗೆ ಹೋಗುತ್ತಿರುವುದರಿಂದ ಮಕ್ಕಳ ಪಾಲಕರು ಕೂಡ ಸದರಿ ಶಾಲೆಗಳನ್ನು ಕನ್ನಡ ಮಾಧ್ಯಮದಲ್ಲಿ ಪ್ರಾರಂಭಿಸುವಂತೆ ಕೋರಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ➢ ತಾವರಗಟ್ಟಿ ಮರಾಠಿ ಶಾಲೆಯಲ್ಲಿ 15 ಮಕ್ಕಳು ಇದ್ದು. ಸದರಿ ಶಾಲೆಯ 2 ಮಕ್ಕಳು ಗೊಧೋಳಿ ಕನ್ನಡ ಶಾಲೆಗೆ ಹೋಗುತ್ತಾರೆ. ಸದರಿ ಗ್ರಾಮದಿಂದ ಶಾಲೆಯು 2 ಕಿ.ಮೀ ಇದ್ದು ಬಸ್ಸಿನ ವ್ಯವಸ್ಥೆ ಇರುತ್ತದೆ.<br><br>➢ ಬಾಳಗುಂದದ ಸರಕಾರಿ ಮರಾಠಿ ಕಿರಿಯ ಪ್ರಾಥಮಿಕ ಶಾಲೆಯಲ್ಲಿ ಮಕ್ಕಳ ಸಂಖ್ಯೆಯು 15 ಇರುತ್ತದೆ. ಮುಂದುವರೆದು, ಬಾಳಗುಂದ ಗ್ರಾಮದ 25 ಮಕ್ಕಳು ತಾವರಗಟ್ಟಿ ಸ್ಟೇಶನ್ ಕನ್ನಡ ಕಿರಿಯ ಪ್ರಾಥಮಿಕ ಶಾಲೆಗೆ ಹೋಗುತ್ತಿದ್ದು. ಸದರಿ ಗ್ರಾಮವು ಬಾಳಗುಂದದಿಂದ 3 ಕಿ.ಮೀ. ಇದ್ದು ಬಸ್ಸಿನ ವ್ಯವಸ್ಥೆ ಇರುತ್ತದೆ. |
| ಇ) | ಮುಂದಿನ ಶೈಕ್ಷಣಿಕ ಸಾಲಿನಲ್ಲಿ ಸರ್ಕಾರವು ಸದರಿ ಶಾಲೆಗಳನ್ನು ಕನ್ನಡ ಮಾಧ್ಯಮದಲ್ಲಿ ಪ್ರಾರಂಭಿಸಲು ಕ್ರಮ ತೆಗೆದುಕೊಳ್ಳುವುದೇ? (ವಿವರ ನೀಡುವುದು). | ಈ ಬಗ್ಗೆ ಪ್ರಸ್ತಾವನೆ ಸ್ವೀಕೃತವಾದಲ್ಲಿ ನಿಯಮಾನುಸಾರ ಪರಿಶೀಲಿಸಿ ಕ್ರಮವಹಿಸಲಾಗುವುದು. |

**ಇಪಿ 98 ಪಿಎಂಎ 2024**

**(ಎಸ್. ಮಧು ಬಂಗಾರಪ್ಪ)**
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು